ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
Karnatak University, Dharwad.
ಪರೀಕ್ಷಾ ವಿಭಾಗ
Examination Section

ಸ್ವಾತಂತ್ರ್ಯದ ಅಮೃತ ಮಹೋತ್ಸವ

ಗೌಪ್ಯ ವಿಭಾಗ
Confidential Branch

ಫೋನ ನಂ. 0836-2215259
ಫ್ಯಾಕ್ಸ ನಂ. 0836-2741928

ನಂ. ಕವಿವಿ/ಪರೀಕ್ಷಾ(ಗೌಪ್ಯ)/2022/219

ದಿನಾಂಕ: 09.01.2023

## ಸುತ್ತೋಲೆ

**ವಿಷಯ:** UUCMS ತಂತ್ರಾಂಶದಲ್ಲಿ ಎಲ್ಲ ಪ್ರಾಧ್ಯಾಪಕರಿಗೆ Login ID ಯನ್ನು ಕಡ್ಡಾಯವಾಗಿ ಪೂರೈಸುವ ಕುರಿತು.

-@-

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಶ್ವವಿದ್ಯಾಲಯದ ವ್ಯಾಪ್ತಿಯ ಎಲ್ಲ ಸಂಲಗ್ನ ಹಾಗೂ ಘಟಕ ಮಹಾವಿದ್ಯಾಲಯಗಳ ಪ್ರಾಚಾರ್ಯರಿಗೆ ಈ ಮೂಲಕ ತಿಳಿಸುವುದೇನೆಂದರೆ, ರಾಷ್ಟ್ರೀಯ ಶಿಕ್ಷಣ ನೀತಿ-2020 (NEP) ರ ಅಡಿಯಲ್ಲಿ ಜಾರಿಯಲ್ಲಿರುವ ಎಲ್ಲ ಸ್ನಾತಕ ಪದವಿಗಳ 1ನೇ ಮತ್ತು 3ನೇ ಸೆಮೆಸ್ಟರ್ ಪ್ರಾಯೋಗಿಕ ಪರೀಕ್ಷೆಯ ಪ್ರಾರಂಭಗೊಳಿಸಲು UUCMS ತಂತ್ರಾಂಶದಲ್ಲಿ ತಮ್ಮ ಮಹಾವಿದ್ಯಾಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲ ಖಾಯಂ ಹಾಗೂ ಅತಿಥಿ ಉಪನ್ಯಾಸಕರಿಗೆ UUCMS Login ID ನೀಡುವುದು ಕಡ್ಡಾಯವಾಗಿರುತ್ತದೆ. ಆದರೆ ಕೆಲವೊಂದು ಮಹಾವಿದ್ಯಾಲಯಗಳಲ್ಲಿ ಎಲ್ಲ ಪ್ರಾಧ್ಯಾಪಕರಿಗೆ ಇಲ್ಲಿಯವರೆಗೂ UUCMS Login ID ಪೂರೈಸದಿರುವುದು ಮೇಲಾಧಿಕಾರಿಗಳ ಗಮನಕ್ಕೆ ಬಂದಿರುತ್ತದೆ.

ಪ್ರತಿ ಪ್ರಾಧ್ಯಾಪಕರು UUCMS Login ID ಮುಖಾಂತರ Login ಆಗಿ ಪ್ರಾಯೋಗಿಕ ಪರೀಕ್ಷೆ ಜರುಗಿಸುವುದು ಕಡ್ಡಾಯವಾಗಿರುತ್ತದೆ. ಆದ್ದರಿಂದ ಪ್ರಾಧ್ಯಾಪಕರು ಪ್ರಾಯೋಗಿಕ ಕಾರ್ಯಕ್ಕೆ Login ID ಯೊಂದಿಗೆ ಹಾಜರಾಗುವುದು. ಸದರಿ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ತಮ್ಮ ಮಹಾವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲ ಖಾಯಂ ಹಾಗೂ ಅತಿಥಿ ಉಪನ್ಯಾಸಕರಿಗೆ ದಿನಾಂಕ: **14.01.2023**ರೊಳಗಾಗಿ Login ID ನೀಡಲು ಈ ಮೂಲಕ ತಿಳಿಸಲಾಗಿದೆ. ತಪ್ಪಿದಲ್ಲಿ ಸಂಬಂಧಪಟ್ಟ ಮಹಾವಿದ್ಯಾಲಯದ ಪ್ರಾಚಾರ್ಯರುಗಳೇ ಹೊಣೆಗಾರರಾಗುತ್ತಾರೆ.

ಮುಂದುವರೆದು, ತಮ್ಮ ಮಹಾವಿದ್ಯಾಲಯದ ಪ್ರಾಧ್ಯಾಪಕರನ್ನು ಪರೀಕ್ಷಾ ಕಾರ್ಯಕ್ಕೆ ನಿಯೋಜಿಸಿದಾಗ ತಕ್ಷಣವೇ ಬಿಡುಗಡೆಗೊಳಿಸಲು ಮಹಾವಿದ್ಯಾಲಯದ ಪ್ರಾಚಾರ್ಯರರಿಗೆ ತಿಳಿಸಲಾಗಿದೆ. ಒಂದು ವೇಳೆ ಬಿಡುಗಡೆಗೊಳಿಸದಿದ್ದಲ್ಲಿ ಕ.ವಿ.ವಿ., ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

9/1/23

ಕುಲಸಚಿವರು (ಮೌಲ್ಯಮಾಪನ)

ಗೆ,

ಪ್ರಾಚಾರ್ಯರು, ಕರ್ನಾಟಕ ವಿಶ್ವವಿದ್ಯಾಲಯದ ಎಲ್ಲ ಸಂಲಗ್ನ ಹಾಗೂ ಅಧೀನ ಮಹಾವಿದ್ಯಾಲಯಗಳು

ಪ್ರತಿ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ :

1. ಡಾ. ಶಿವಶಂಕರ ಎಸ್. ನಿರ್ದೇಶಕರು, ಯುಯುಸಿಎಂಎಸ್ ಘಟಕ, ಕ.ವಿ.ವಿ., ಧಾರವಾಡ
2. ಸಿಸ್ಟಮ್ ಅನಾಲಿಸ್ಟ, ಗಣಕಯಂತ್ರ ಕೇಂದ್ರ, ಪರೀಕ್ಷಾ ವಿಭಾಗ, ಕ.ವಿ.ವಿ.ಧಾರವಾಡ.
3. ಉಪಕುಲಸಚಿವರು / ಸಹಾಯಕ ಕುಲಸಚಿವರು, ಪರೀಕ್ಷಾ ವಿಭಾಗ, ಕನಾಟಕ ವಿಶ್ವವಿದ್ಯಾಲಯ, ಧಾರವಾಡ.
4. ಕುಲಪತಿಗಳು/ ಕುಲಸಚಿವರು/ ಕುಲಸಚಿವರು (ಮೌಲ್ಯಮಾಪನ) ಇವರ ಆಪ್ತಕಾರ್ಯದರ್ಶಿಗಳು, ಕ.ವಿ.ವಿ., ಧಾರವಾಡ.
5. ನಿರ್ದೇಶಕರು ಅಂತರ್ಜಾಲ ವಿಭಾಗ, ಕ.ವಿ.ವಿ., ಧಾರವಾಡ ಇವರಿಗೆ ಮುಂದುವರೆದು ಸದರ ಸುತ್ತೋಲೆಯನ್ನು ಕ.ವಿ.ವಿ., ಅಂತರ್ಜಾಲದಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.